**All India Radio: Bangalore**
**National Bulletin In Kannada**
**24.04.2025  13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**24.04.2025  13.10 p.m.**
**<><><><>**

ಮುಖ್ಯಾಂಶಗಳು

1. ಪಹಲ್ಗಾಮ್ ಭಯೋತ್ಪಾದಕ ದಾಳಿ ; ಸಂಜೆ ಸರ್ವಪಕ್ಷ ಸಭೆ ಕರೆದ ಕೇಂದ್ರ ಸರ್ಕಾರ
2. ಉಗ್ರರ ದಾಳಿ ಹಿನ್ನಲೆ ; ಪಾಕಿಸ್ತಾನಕ್ಕೆ ಅನಪೇಕ್ಷಿತ ವ್ಯಕ್ತಿಗಳ ಪಟ್ಟಿ ಹಸ್ತಾಂತರಿಸಿದ ಭಾರತ
3. ಇಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನ ; ಮಧುಬನಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ಭಾಗಿ
4. ಪಹಲ್ಗಾಮ್ ದಾಳಿಯಲ್ಲಿ ಹುತಾತ್ಮರಾದ ರಾಜ್ಯದ ಇಬ್ಬರ ಪಾರ್ಥೀವ ಶರೀರಕ್ಕೆ ಗಣ್ಯರಿಂದ ಗೌರವ ನಮನ ಸಲ್ಲಿಕೆ.
5. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿ

<><><><>

ಪಹಲ್ಗಾಮ್ ಭಯೋತ್ಪಾದಕ ದಾಳಿ ಘಟನೆಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನವದೆಹಲಿಯಲ್ಲಿಂದು ಸರ್ವಪಕ್ಷಗಳ ಸಭೆ ಕರೆದಿದೆ. ಸಂಜೆ ೬ ಗಂಟೆಗೆ ಸಂಸತ್ ಭವನದ ಸಂಕೀರ್ಣದಲ್ಲಿ ಸರ್ವಪಕ್ಷಗಳ ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ. ದಾಳಿಯ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ವಿವಿಧ ರಾಜಕೀಯ ಪಕ್ಷಗಳ ನಾಯಕರಿಗೆ ಮಾಹಿತಿಯನ್ನು ನೀಡಲಿದ್ದಾರೆ. ಜೊತೆಗೆ ಘಟನೆ ನಂತರ ಪಾಕಿಸ್ತಾನದ ವಿರುದ್ಧ ಭಾರತ ಕೈಗೊಂಡಿರುವ ಕಠಿಣ ಕ್ರಮಗಳ ಕುರಿತು ವಿವರ ನೀಡುವ ಸಾಧ್ಯತೆಯಿದೆ.

<><><><>

ಪಹಲ್ಗಾಮ್ ಭಯೋತ್ಪಾದಕರ ದಾಳಿ ಹಿನ್ನೆಲೆಯಲ್ಲಿ ಭಾರತ ಪಾಕಿಸ್ತಾನದ ಹಿರಿಯ ರಾಯಭಾರಿ ಸಾದ್ ಅಹಮ್ಮದ್ ವಾರೈಚ್ ಅವರನ್ನು ಕರೆಸಿ ಪಾಕ್‌ನ ಮಿಲಿಟರಿ ಅಧಿಕಾರಿಗಳ ವಿರುದ್ಧದ ಪರ್ಸೋನ ನಾನ್ ಗ್ರಾಟ ಅಂದರೆ ಅನಪೇಕ್ಷಿತ ವ್ಯಕ್ತಿ ಟಿಪ್ಪಣಿಯನ್ನು ಹಸ್ತಾಂತರಿಸಲಾಗಿದೆ. ಕಳೆದ

ರಾತ್ರಿ ರಾಯಭಾರಿಯನ್ನು ಕರೆಸಿ ಪಟ್ಟಿಯನ್ನು ಹಸ್ತಾಂತರ ಮಾಡಲಾಗಿದೆ ಎಂದು ಮೂಲಗಳು ತಿಳಿಸಿದೆ. ಪಹಲ್ಗಾಮ್ ದಾಳಿ ಹಿನ್ನೆಲೆಯಲ್ಲಿ ಭಾರತ ಪಾಕಿಸ್ತಾನದ ವಿರುದ್ಧ ಹಲವು ಕಠಿಣ ಕ್ರಮಗಳನ್ನು ಕೈಗೊಂಡಿದ್ದು, ಸಿಂಧುಜಲ ಒಪ್ಪಂದವನ್ನು ರದ್ದುಗೊಳಿಸಿದೆ, ಅಠಾರಿಯ ಚೆಕ್ ಪೋಸ್ಟ್‌ನ್ನು ಬಂದ್ ಮಾಡಲಾಗಿದೆ ಮತ್ತು ಇಸ್ಲಾಮಾಬಾದ್ ಜೊತೆಗಿನ ರಾಜತಾಂತ್ರಿಕ ಸಂಬಂಧಗಳನ್ನು ಕಡಿತಗೊಳಿಸಲಾಗಿದೆ. ಅಲ್ಲದೇ ಭಾರತ ಪಾಕಿಸ್ತಾನದ ಪ್ರಜೆಗಳಿಗೆ ನೀಡಿದ ಸಾರ್ಕ್ ವಿಸಾ ವಿನಾಯಿತಿಯನ್ನು ಅಮಾನತ್ತುಗೊಳಿಸಿದೆ.

ಧ್ವನಿ : ಸಿಸಿಎಸ್ (೨೪ ಸೆಕೆಂಡ್‌ಗಳು)

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಿಹಾರಕ್ಕೆ ಭೇಟಿ ನೀಡಿದ್ದು, ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಈ ವೇಳೆ ಪ್ರಧಾನಿ ಅವರು ೧೩ ಸಾವಿರ ೪೮೦ ಕೋಟಿ ರೂಪಾಯಿಗಳಿಗೂ ಅಧಿಕ  ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಿದರು. ನಂತರ ಪ್ರಧಾನಿಯವರು ಮೌನ ಆಚರಿಸುವ ಮೂಲಕ ಹುತಾತ್ಮರಿಗೆ ಗೌರವ ಸಲ್ಲಿಸಿ ತಮ್ಮ ಭಾಷಣ ಆರಂಭಿಸಿದರು. ಈ ಸಂದರ್ಭದಲ್ಲಿ ಬಿಹಾರದ ವಿಕಾಸಕ್ಕೆ ವಿದ್ಯುತ್, ರೈಲು, ಗ್ಯಾಸ್ ಹಾಗೂ ರೋಜ್‌ಗಾರ್ ಮೂಲಕ ಹೊಸ ಅವಕಾಶಗಳನ್ನು ಒದಗಿಸಲಿದೆ. ಭಾರತದ ಗ್ರಾಮಗಳು ಎಲ್ಲಿಯವರೆಗೆ ಅಭಿವೃದ್ಧಿ ಹೊಂದುವುದಿಲ್ಲವೋ ಅಲ್ಲಿಯವರೆಗೆ ರಾಷ್ಟ್ರದ ಅಭಿವೃದ್ಧಿ ಸಾಧ್ಯವಿಲ್ಲ. ಕಳೆದ ದಶಕದಲ್ಲಿ ೨ ಲಕ್ಷ ಗ್ರಾಮಗಳಿಗೆ ಅಂತರ್ಜಾಲ ಜೋಡಿಸಲಾಗಿದೆ. ೨ ಲಕ್ಷ ಕೋಟಿಗೂ ಹೆಚ್ಚು ನಿಧಿಯನ್ನು ಪಂಚಾಯಿತಿಗೆ ನೀಡಲಾಗಿದೆ ಎಂದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)

ಈ ವರ್ಷ ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನು "ಸಂಪೂರ್ಣ ಸರ್ಕಾರದ" ವಿಧಾನದ ಮೂಲಕ ಪ್ರಮುಖ ರಾಷ್ಟ್ರೀಯ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದೆ.ಇದರಲ್ಲಿ ಆರು ಕೇಂದ್ರ ಸಚಿವಾಲಯಗಳು - ಗ್ರಾಮೀಣಾಭಿವೃದ್ಧಿ ಸಚಿವಾಲಯ, ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ವಿದ್ಯುತ್ ಸಚಿವಾಲಯ, ರೈಲ್ವೆ ಸಚಿವಾಲಯ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಗಳು ಭಾಗವಹಿಸುತ್ತವೆ.

ಇದೇ ವೇಳೆ ಪ್ರಧಾನಮಂತ್ರಿ ವಿವಿಧ ವಿಭಾಗಗಳಲ್ಲಿ ೨೦೨೫ರ ವಿಶೇಷ ವರ್ಗದ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

<><><><>

ಜಮ್ಮು ಮತ್ತು ಕಾಶ್ಮೀರ ಕುಲ್ಗಮ್ ಜಿಲ್ಲೆಯಲ್ಲಿ ಭಯೋತ್ಪಾದಕರ ವಿರುದ್ಧ ಶೋಧ ಕಾರ್ಯ ಮುಂದುವರೆದಿದೆ. ನಿನ್ನೆ ಸಂಜೆ ಭಯೋತ್ಪಾದಕರು ಮತ್ತು ಸೇನಾಪಡೆಗಳ ನಡುವೆ ಗುಂಡಿನ ಚಕಮಕಿ ನಡೆದ ಹಿನ್ನೆಲೆಯಲ್ಲಿ ದಕ್ಷಿಣ ಕಾಶ್ಮೀರದ ಕುಲ್ಗಮ್‌ನ ತಂಗ್‌ಮಾರ್ಗ್ ಪ್ರದೇಶದಲ್ಲಿ ಕಾರ್ಯಾಚರಣೆ ಆರಂಭಿಸಲಾಗಿದೆ. ಸೇನೆ, ಸಿಆರ್‌ಪಿಎಫ್ ಮತ್ತು ಜಮ್ಮು ಕಾಶ್ಮೀರ ಪೊಲೀಸರ ಜಂಟಿ ತಂಡ ಬೆಳಗ್ಗೆಯಿಂದಲೇ ಕಾರ್ಯಾಚರಣೆ ಪುನರಾರಂಭಿಸಿದೆ. ಕತ್ತಲೆ ಹಿನ್ನೆಲೆಯಲ್ಲಿ ಕಳೆದ ರಾತ್ರಿ ಕಾರ್ಯಾಚರಣೆ ಸ್ಥಗಿತಗೊಳಿಸಲಾಗಿತ್ತು. ಪ್ರದೇಶದ ಎಲ್ಲ ಆಗಮನ ಮತ್ತು ನಿರ್ಗಮನ ದ್ವಾರಗಳನ್ನು ಬಂದ್ ಮಾಡಲಾಗಿದೆ.

<><><><>

ಉಗ್ರರನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ದೇಶದಲ್ಲಿ ಭಯೋತ್ಪಾದನಾ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಗ್ರಹಿಸಿ, ಉಗ್ರರನ್ನು ಸದೆಬಡಿಯುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಕೇಂದ್ರಕ್ಕೆ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ಕಾಶ್ಮೀರದ ಪೆಹಲ್ಗಾಮನಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟ ಮತ್ತೀಕೆರೆಯಲ್ಲಿರುವ ಭರತ್ ಭೂಷಣ್ ಅವರ ನಿವಾಸಕ್ಕೆ ತೆರಳಿ ಅಂತಿಮ ನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತಮ ಶಿಕ್ಷಣ ಪಡೆದಿದ್ದ ಭರತ್ ಭೂಷಣ್ ಉಗ್ರರ ದಾಳಿಗೆ ಬಲಿಯಾಗಿರುವುದು ದುರದೃಷ್ಟಕರ. ಉಗ್ರರ ದಾಳಿ ಅಮಾನವೀಯವಾದ ಕೃತ್ಯವಾಗಿ ತೀವ್ರವಾಗಿ ಖಂಡಿಸುವುದಾಗಿ ತಿಳಿಸಿದರು. ದಾಳಿಯಲ್ಲಿ ಮೃತಪಟ್ಟ ಬೆಂಗಳೂರಿನ ಭರತ್ ಭೂಷಣ್ ಅವರ ಪಾರ್ಥಿವ ಶರೀರವನ್ನು ಮತ್ತಿಕೆರೆಯ ಅವರ ನಿವಾಸದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿದೆ. ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್, ಕೇಂದ್ರ ಸಚಿವ ವಿ. ಸೋಮಣ್ಣ, ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಗೌರವ ನಮನ ಸಲ್ಲಿಸಿದರು. ಮಧ್ಯಾಹ್ನದ ನಂತರ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ. ಮತ್ತೊಬ್ಬ ಹುತಾತ್ಮ ಮಂಜುನಾಥ್ ಅವರ ಮೃತದೇಹವನ್ನು ಶಿವಮೊಗ್ಗದ ವಿಜಯನಗರದ ಅವರ ನಿವಾಸದಲ್ಲಿ ಸಾರ್ವಜನಿಕ ದರ್ಶನಕ್ಕೆ

ಇಡಲಾಗಿದ್ದು, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಬಿ.ವೈ. ರಾಘವೇಂದ್ರ ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಅಂತಿಮ ದರ್ಶನ ಪಡೆದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಮುಂಬೈನಲ್ಲಿಂದು ಅತಿದೊಡ್ಡ ಅಂತಾರಾಷ್ಟ್ರೀಯ ಉಕ್ಕು ಕಾರ್ಯಕ್ರಮ ಇಂಡಿಯಾ ಸ್ಟೀಲ್ -೨೦೨೫ ಉದ್ಘಾಟಿಸಲಿದ್ದಾರೆ. ಉಕ್ಕು ಉದ್ಯಮದ ಪ್ರಮುಖ ಕಾರ್ಯಕ್ರಮಕ್ಕೆ ಪ್ರಧಾನಿಯವರು ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಲಿದ್ದಾರೆ. ಮೂರು ದಿನಗಳ ಈ ಅಂತಾರಾಷ್ಟ್ರೀಯ ಪ್ರದರ್ಶನ ಮತ್ತು ಸಮಾವೇಶದಲ್ಲಿ ಉಕ್ಕು ವಲಯದ ಭವಿಷ್ಯದ ಯಶೋಗಾಥೆ ಕುರಿತು ಚರ್ಚಿಸಲು ಜಾಗತಿಕ ಉದ್ಯಮದ ಪ್ರಮುಖ ಪಾಲುದಾರರು ಭಾಗವಹಿಸಲಿದ್ದಾರೆ. ಅಲ್ಲದೇ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಪಿಯೂಷ್ ಗೋಯಲ್, ಅಶ್ವಿನಿ ವೈಷ್ಣವ್, ಪ್ರಲ್ಹಾದ್ ಜೋಶಿ, ಜಿ. ಕಿಶನ್ ರೆಡ್ಡಿ, ಭೂಪತಿ ರಾಜು ಮತ್ತಿತರರು ಹಾಗೂ ಹಲವು ರಾಜ್ಯಗಳು ಮುಖ್ಯಮಂತ್ರಿಗಳು ಭಾಗವಹಿಲಿಸದ್ದಾರೆ. ೬ನೇ ಈ ದ್ವೈವಾರ್ಷಿಕ ಸಮಾವೇಶ ಉಕ್ಕು ಉದ್ಯಮದ ಮಹತ್ವಾಕಾಂಕ್ಷೆಯ ಪ್ರಗತಿಗೆ ನೆರವಾಗಲಿದೆ ಎಂದು ಹೇಳಲಾಗಿದೆ.

<><><>

ವಿಶ್ವ ಆರೋಗ್ಯ ಸಂಸ್ಥೆಯಿಂದ ಇಂದಿನಿಂದ ಜಗತ್ತಿನಾದ್ಯಂತ ವಿಶ್ವ ರೋಗ ನಿರೋಧಕ ಲಸಿಕಾ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದೆ. ಈ ಒಂದು ವಾರವೀಡಿ ಅಂದರೆ ಏಪ್ರಿಲ್ ೩೦ ರವರೆಗೆ ಜೀವ ಉಳಿಸುವಂತಹ ರೋಗ ನಿರೋಧಕ ಲಸಿಕೆಗಳನ್ನು ನೀಡುವ ಸಪ್ತಾಹ ಆಚರಿಸಲಾಗುವುದು. ಈ ವರ್ಷದ ಘೋಷ ವಾಕ್ಯ 'ಪ್ರತಿಯೊಬ್ಬರಿಗೂ ರೋಗನಿರೋಧಕ ಲಸಿಕೆ ಮಾನವೀಯವಾಗಿ ಸಾಧ್ಯ' ಎಂಬುದಾಗಿದೆ. ಇದರಡಿ ಜೀವ ರಕ್ಷಕ ಲಸಿಕೆಗಳನ್ನು ಎಲ್ಲರಿಗೂ ಹಾಕಲಾಗುವುದು. ವಿಶ್ವ ಆರೋಗ್ಯ ಸಂಸ್ಥೆ ಇಂತಹ ಅಗತ್ಯ ಲಸಿಕೆಗಳ ಮೂಲಕ ಕಳೆದ ೫೦ ವರ್ಷಗಳಲ್ಲಿ ಕನಿಷ್ಠ ೧೫ ಕೋಟಿ ೪೦ ಲಕ್ಷ ಜೀವಗಳನ್ನು ಉಳಿಸಲಾಗಿದೆ ಎಂದು ಹೇಳಿದೆ.

<><><>

ಐಪಿಎಲ್ ಟಿ-೨೦ ಪಂದ್ಯಾವಳಿಯಲ್ಲಿಂದು ಅತಿಥೇಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ ರಾಯಲ್ಸ್ ತಂಡ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ. ನಿನ್ನೆ ನಡೆದ ಸನ್‌ರೈಸರ್ಸ್ ಹಾಗೂ ಮುಂಬೈ

ಇಂಡಿಯನ್ಸ್ ನಡುವಿನ ಮುಂಬೈ ಇಂಡಿಯನ್ಸ್ ೨ ವಿಕೆಟ್‌ಗಳ ಭರ್ಜರಿ ಜಯಗಳಿಸಿದ್ದಾರೆ. ೧೫.೪ ಓವರ್‌ಗಳಲ್ಲಿ ಮೂರು ವಿಕೆಟ್‌ಗಳ ನಷ್ಟಕ್ಕೆ ೧೪೪ ರನ್ ಗಳಿಸಿದರು.

<><><><>

ಭಾರತೀಯ ಗ್ರ್ಯಾಂಡ್‌ಮಾಸ್ಟರ್ ಕೊನೆರು ಹಂಪಿ ನಿನ್ನೆ ಪುಣೆ ಫಿಡೆ ಮಹಿಳಾ ಗ್ರ್ಯಾಂಡ್‌ಪ್ರಿಕ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಅವರು ಬಲ್ಗೇರಿಯಾದ ನುರ್ಗ್ಯುಲ್ ಸಲಿಮೊವಾ ವಿರುದ್ಧ ೭-೯ ಅಂಕಗಳಿಂದ ಮಣಿಸಿ ಅಂತಿಮ ಸುತ್ತಿನಲ್ಲಿ ಜಯಗಳಿಸಿದರು. ಆದರೆ ಚೀನಾದ ಗ್ರ್ಯಾಂಡ್ ಮಾಸ್ಟರ್ ಝು ಜಿನೆರ್, ರಷ್ಯಾದ ಪೊಲಿನಾ ಶುವಾ ಲೊವ ೭-೯ ಅಂಕಗಳಿಂದ ಅವರನ್ನು ಅಂತಿಮ ಸುತ್ತಿನಲ್ಲಿ ಮಣಿಸಿದರು. ಹಾಗಾಗಿ ಪ್ರಶಸ್ತಿಯ ಮೊತ್ತ ಕೊನೆರು ಹಂಪಿ ಹಾಗೂ ಝು ನಡುವೆ ಹಂಚಿಕೆಯಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>